# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಚಿನ್ನಸ್ವಾಮಿ, ಹಿಂದಿನ ಕಾರ್ಯದರ್ಶಿ, ತಗಡೂರು ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಹಾಲಿ ಗ್ರೇಡ್-1 ಕಾರ್ಯದರ್ಶಿ, ನುಗ್ಗೇಹಳ್ಳಿ ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ರವರ ವಿರುದ್ಧ ಲೋಕಾಯುಕ್ತ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಕುರಿತು – ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/570/ಗ್ರಾಪಂಕಾ/2016, ದಿನಾಂಕ:18-10-2016.
2. ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರವರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:Uplok-2/DE/544/2016/ ARE-10 ದಿನಾಂಕ: 23-10-2017.
3. ಮಾನ್ಯ ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: Uplok-2/ARE-10/14-A/DE-544/2016 ದಿನಾಂಕ: 24-10-2017.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ/796/ಗ್ರಾಪಂಕಾ/2017, ದಿನಾಂಕ: 08-11-2017.
5. ಶ್ರೀ ಚಿನ್ನಸ್ವಾಮಿ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿ:19-02-2018.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಚಿನ್ನಸ್ವಾಮಿ, ಹಿಂದಿನ ಕಾರ್ಯದರ್ಶಿ, ತಗಡೂರು ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಹಾಲಿ ಗ್ರೇಡ್-1 ಕಾರ್ಯದರ್ಶಿ, ನುಗ್ಗೇಹಳ್ಳಿ ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-A ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಅದರಂತೆ ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 9 ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ":**

ಶ್ರೀ ಚಿನ್ನಸ್ವಾಮಿ, ಹಾಲಿ ಗ್ರೇಡ್-1 ಕಾರ್ಯದರ್ಶಿ, ನುಗ್ಗೇಹಳ್ಳಿ ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಇವರು ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕು, ತಗಡೂರು ಗ್ರಾಮ ಪಂಚಾಯತಿಯಲ್ಲಿ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ 201-11ನೇ ಸಾಲಿನಲ್ಲಿ ಇಂದಿರಾ ಆವಾಜ್ ವಸತಿ ಯೋಜನೆಯಡಿ ಅನರ್ಹ ಫಲಾನುಭವಿ ಶ್ರೀಮತಿ ಸರೋಜಮ್ಮ ಕೋಂ ಲಿಂಗೇಗೌಡ ರವರಿಗೆ ರೂ. 20,000/ಗಳ ಚೆಕ್ಕನ್ನು ಮಂಜೂರು ಮಾಡಿ ನಂತರ ಸದರಿ ಮೊತ್ತವನ್ನು ವಸೂಲಿ ಮಾಡಿ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮಕ್ಕೆ ಜಮೆ ಮಾಡಿರುತ್ತಾರೆ. ಶ್ರೀಮತಿ ಮಮತ ಕೋಂ ಚಂದ್ರಶೇಖರ್ ಮತ್ತು ಶ್ರೀಮತಿ ಲಲಿತಮ್ಮ ಕೋಂ ಇಂದ್ರೇಶ್ ರವರು ವಾಸದ ಮನೆಯನ್ನು ಹೊಂದಿದ್ದು ಸದರಿಯವರು ವಸತಿ ಯೋಜನೆಯಡಿ ಆಯ್ಕೆಯಾಗಲು ಅನರ್ಹರಾಗಿದ್ದರೂ ಸಹ ವಸತಿ ಯೋಜನೆಯಡಿ ಇವರುಗಳನ್ನು ಫಲಾನುಭವಿಯನ್ನಾಗಿ ಆಯ್ಕೆ ಮಾಡಿ ದುರ್ನಡತೆ ಎಸಗಿದ್ದು, ಸರ್ಕಾರಿ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ನಿಷ್ಠೆ ತೋರದೆ ಮತ್ತು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಸದರಿಯವರು ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮ 1966 ರ ನಿಯಮ 3(1)(i),(ii) & (iii) ಅನ್ವಯ ದುರ್ನಡತೆ ಎಸಗಿರುತ್ತಾರೆ."

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಚಿನ್ನಸ್ವಾಮಿ, ಹಿಂದಿನ ಕಾರ್ಯದರ್ಶಿ, ತಗಡೂರು ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಹಾಲಿ ಗ್ರೇಡ್-1 ಕಾರ್ಯದರ್ಶಿ; ನುಗ್ಗೇಹಳ್ಳಿ ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತ ರವರು ಅಂಗೀಕರಿಸಿ ಶ್ರೀ ಚಿನ್ನಸ್ವಾಮಿ, ಗ್ರೇಡ್-1 ಕಾರ್ಯದರ್ಶಿ, ಇವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8 (iii) ಅನ್ವಯ "ಮೂರು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಸಹಿತ ಪರಿಣಾಮದೊಂದಿಗೆ ತಡೆಹಿಡಿಯುವಂತೆ" ದಂಡನೆ ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಈ ಸಂಬಂಧ ಶ್ರೀ ಚಿನ್ನಸ್ವಾಮಿ, ಗ್ರೇಡ್-1 ಕಾರ್ಯದರ್ಶಿ ಇವರಿಗೆ ನಿಯಮಾನುಸಾರ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತ ರವರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿತ್ತು. ಈ ನೋಟೀಸಿಗೆ ಅವರು ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ಮನವಿ ಮೂಲಕ ತಮ್ಮ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಆಪಾದಿತ ನೌಕರರು ಸರ್ಕಾರದ 2ನೇ ಕಾರಣ ಕೇಳುವ ನೋಟಿಸಿಗೆ ನೀಡಿರುವ ಲಿಖಿತ ಹೇಳಿಕೆಯಲ್ಲಿ ಈ ಕೆಳಕಂಡ ಪ್ರಮುಖ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

"ದಿನಾಂಕ:03-09-2011 ರಿಂದ 24-05-2012 ರವರೆಗೆ ಹಾಸನ ಜಿಲ್ಲೆ, ಚನ್ನರಾಯಪಟ್ಟಣ ತಾಲ್ಲೂಕು ನುಗ್ಗೇಹಳ್ಳಿ ಹೋಬಳಿ ತಗಡೂರು ಗ್ರಾಮ ಪಂಚಾಯತಿಯಲ್ಲಿ ಅಂದಿನ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಿರುತ್ತೇನೆ. ನನ್ನ ಸೇವಾ ಅವಧಿಯಲ್ಲಿ ವಸತಿ ಯೋಜನೆಗೆ ಸಂಬಂಧಿಸಿದಂತೆ ಯಾವುದೇ ಮನೆಗಳನ್ನು ಮಂಜೂರು ಮಾಡಿರುವುದಿಲ್ಲ. ವಸತಿ ಯೋಜನೆಗೆ ನಿಗಮದಿಂದ ನಿಯೋಜನೆಗೊಂಡಿರುವ ನೋಡಲ್ ಅಧಿಕಾರಿ ಶ್ರೀ ಪಾಲಾಕ್ಷಪ್ಪ ರವರ ನಿರ್ದೇಶನದ ಮೇರೆಗೆ ವಸತಿ ಬಿಲ್ಲುಗಳನ್ನು ಪ್ರಗತಿಗೆ ಅನುಸಾರವಾಗಿ ವಿತರಿಸಲಾಗಿರುತ್ತದೆ. ಪ್ರಗತಿವಾರು ವಸತಿ ಬಿಲ್ಲುಗಳನ್ನು ಪಾವತಿಸಲು ನಿಗಮದ ಮಾರ್ಗಸೂಚಿಗಳು ಮತ್ತು ನೋಡಲ್ ಅಧಿಕಾರಿಗಳ ನಿಯಮಾನುಸಾರ ಸೂಚನೆಯ ಪ್ರಕಾರವಾಗಿಯೇ ಬಿಲ್ಲುಗಳು ಪಾವತಿಯಾಗಿರುತ್ತವೆ. ಮಮತ ಕೋಂ ಚಂದ್ರಶೇಖರ್, ಲಲಿತಮ್ಮ ಕೋಂ ಇಂದ್ರೇಶ್ ಕೋಮಲ ಕೋಂ ಮಂಜುನಾಥ ಹಾಗೂ ಚಂದ್ರಮ್ಮ ಕೋಂ ವಿರೂಪಾಕ್ಷ ಇವರುಗಳಿಗೆ ಮೊದಲನೆಯ ಮತ್ತು ಕೆಲವರಿಗೆ ಎರಡು ಬಿಲ್ಲುಗಳು ಇವರುಗಳ ಖಾತೆಗೆ ಆನ್‌ಲೈನ್ ಪ್ರಗತಿ ತೋರಿಸಿ(ಅನುದಾನ) ಬಿಲ್ಲು ಪಾವತಿಯಾಗುವಂತೆ ಮಾಡಿರುತ್ತಾರೆ. ಇದಕ್ಕೆ ಕಾರಣ ನೋಡಲ್ ಅಧಿಕಾರಿ ಮತ್ತು ಅಂದಿನ ಎರಡನೇ ದರ್ಜೆ ಗುಮಾಸ್ತ ಕಾಂತರಾಜು ಇವರುಗಳು. ನನ್ನ ಹಸ್ತಕ್ಷೇಪವಿರುವುದಿಲ್ಲ. ಹಾಗೆಯೇ ಶ್ರೀಮತಿ ಸರೋಜಮ್ಮ ಕೋಂ ಲಿಂಗೇಗೌಡ ಇವರಿಗೆ ಇಂದಿರಾ ಆವಾಜ್ ಯೋಜನೆಯಡಿ ಮನೆ ಮಂಜೂರಾಗಿದ್ದು, ಎರಡು ಬಿಲ್ಲು ಪಾವತಿಸಿರುತ್ತೇನೆ. ಚೆಕ್ ಮೂಲಕ ಇವರ ಖಾತೆಗೆ ಜಮೆ ಮಾಡಿರುತ್ತೇನೆ. ಸಾಮಾನ್ಯ ಸಭೆಯಲ್ಲಿ ಅನುಮತಿ ಹಾಗೂ ನೋಡೆಲ್ ಅಧಿಕಾರಿಗಳ ಸೂಚನೆಯ ಪ್ರಕಾರ ಸ್ಥಳ ಪರಿಶೀಲನೆ ಮಾಡಿ ಬಿಲ್ಲು ಪಾವತಿಸಲಾಗಿರುತ್ತದೆ. ಯಾವುದೇ ರೀತಿಯಲ್ಲಿ ದುರ್ನಡತೆಗೆ ಅವಕಾಶ ಮಾಡಿರುವುದಿಲ್ಲ ಎಂದು ತಿಳಿಸಿರುತ್ತಾರೆ.

ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಆಪಾದಿತರ ವಿರುದ್ಧದ ಆರೋಪಗಳನ್ನು ಸಾಬೀತು ಪಡಿಸಲು ತಮ್ಮ ವಿಚಾರಣಾ ವರದಿಯ ಪುಟ ಸಂಖ್ಯೆ 6 ರಿಂದ 12 ರ ವರೆಗೆ ಸಮರ್ಥವಾದ ಕಾರಣಗಳನ್ನು ನೀಡಿರುತ್ತಾರೆ.

The oral and documentary evidence on record clearly reveals that the DGo during the year 2010-11 issued a cheque of Rs.20,000/- to Smt.Sarojamma W/o Lingegowda under Indira Awaz Scheme, though she was not eligible for the benefit which was recovered and credited to RGRHCL, extended benefit of housing scheme to Smt.Mamatha W/o Chandrashekhar and Smt.Lalithamma W/o Indresh though they were owning residential houses and they are not eligible for housing scheme during the year 2010-11. Thereby the DGO, being a Governmemt/public servant has failed to maintained absolute integrity besides devotion to duty and acted in a manner unbecoming of a Government servant. Hence, I proceed to answer point No.1 in the affirmative.

ಸರ್ಕಾರವು ಆಪಾದಿತರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಲಿಖಿತ ಹೇಳಿಕೆ ಮತ್ತು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ. ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತ ರವರು ವಿಚಾರಣಾ ವರದಿಯನ್ನು ಅಂಗೀಕರಿಸಿ ಆರೋಪದ ತೀವ್ರತೆಗೆ ಅನುಗುಣವಾಗಿ ಶ್ರೀ ಚಿನ್ನಸ್ವಾಮಿ, ಹಿಂದಿನ ಕಾರ್ಯದರ್ಶಿ, ತಗಡೂರು ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಹಾಲಿ ಗ್ರೇಡ್-1 ಕಾರ್ಯದರ್ಶಿ, ನುಗ್ಗೇಹಳ್ಳಿ ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8 (iii) ಅನ್ವಯ **"ಮೂರು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಸಹಿತ ಪರಿಣಾಮದೊಂದಿಗೆ ತಡೆಹಿಡಿಯುವಂತೆ"** ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ವಿಚಾರಣಾಧಿಕಾರಿಯವರು ಆಪಾದನೆಯನ್ನು ಸಾಬೀತುಪಡಿಸಲು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿರುತ್ತದೆ. ಆದುದರಿಂದ ಶ್ರೀ ಚಿನ್ನಸ್ವಾಮಿ, ಗ್ರೇಡ್-1 ಕಾರ್ಯದರ್ಶಿ, ಇವರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುತ್ತದೆ. ಆದುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತ ರವರ ಶಿಫಾರಸ್ಸನ್ನು ಪರಿಶೀಲಿಸಿ ಶ್ರೀ ಚಿನ್ನಸ್ವಾಮಿ, ಹಿಂದಿನ ಕಾರ್ಯದರ್ಶಿ, ತಗಡೂರು ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಹಾಲಿ ಗ್ರೇಡ್-1 ಕಾರ್ಯದರ್ಶಿ, ನುಗ್ಗೇಹಳ್ಳಿ ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(iii) ಅನ್ವಯ **"ಮೂರು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಸಹಿತ ಪರಿಣಾಮದೊಂದಿಗೆ ತಡೆಹಿಡಿಯುವ"** ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/796/ಗ್ರಾಪಂಕಾ/2017, ಬೆಂಗಳೂರು, ದಿನಾಂಕ:17-04-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಚಿನ್ನಸ್ವಾಮಿ, ಹಿಂದಿನ ಕಾರ್ಯದರ್ಶಿ, ತಗಡೂರು ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಹಾಲಿ ಗ್ರೇಡ್-1 ಕಾರ್ಯದರ್ಶಿ, ನುಗ್ಗೇಹಳ್ಳಿ ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(iii) ಅನ್ವಯ **"ಮೂರು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಸಹಿತ ಪರಿಣಾಮದೊಂದಿಗೆ ತಡೆಹಿಡಿಯುವ"** ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

19/4/18
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ ರವರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

**3**.ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

**4**.ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

**5**.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಹಾಸನ ಜಿಲ್ಲೆ.

**6**.ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಚನ್ನರಾಯಪಟ್ಟಣ, ಹಾಸನ ಜಿಲ್ಲೆ.

**7**.ಶ್ರೀ ಚಿನ್ನಸ್ವಾಮಿ, ಹಿಂದಿನ ಕಾರ್ಯದರ್ಶಿ, ತಗಡೂರು ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಹಾಲಿ ಗ್ರೇಡ್-1 ಕಾರ್ಯದರ್ಶಿ, ಸುಗ್ಗೇಹಳ್ಳಿ ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ

**8**.ಗಣಕ ಕೋಶ

**9**.ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.